<u>ಹೆಚ್ಚುವರಿ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಜಮಖಂಡಿ.</u>

O.S. No– 118/2019

Pw–1

<u>ದಿನಾಂಕಃ 01.04.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

**ಮುಂದುವರಿದ ಪಾಟಿ ಸವಾಲುಃ ಶ್ರೀ. 3 ನೇ ಪ್ರತಿವಾದಿ ಪರ ವಕೀಲರಿಂದಃ** 2016 ರಲ್ಲಿ ನನ್ನ ತಂದೆ ಸರ್ವೆ ನಂ. 106/5 ವಿಸ್ತೀರ್ಣ 10 ಗುಂಟೆ ಜಮೀನು ಹಾಗೂ 108/3 ವಿಸ್ತೀರ್ಣ 30 ಗುಂಟೆ ಜಮೀನನ್ನು 3 ನೇ ಪ್ರತಿವಾದಿಗೆ ನೊಂದಾಯಿತ ಖರೀದಿ ಕರಾರು ಪತ್ರ ಮಾಡಿಸಿಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 3 ನೇ ಪ್ರತಿವಾದಿ ಹೆಚ್ಚಿನ ಬೆಲೆ ಕೊಟ್ಟಿದ್ದರಿಂದ ಅವರಿಗೆ ಖರೀದಿ ಕರಾರು ಮಾಡಿಕೊಟ್ಟಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ನನ್ನ ತಂದೆ ನಮ್ಮ ಪ್ರಾಪಂಚಿಕ ಅಡಚಣೆಗಾಗಿ ಆಸ್ತಿಯನ್ನು ಮಾರಾಟ ಮಾಡಿರುತ್ತಾರೆ ಎಂದು ಖರೀದಿಕರಾರು ಪತ್ರ ಮಾಡಿಸಿಕೊಟ್ಟಿದ್ದಾರೆ ಎಂದರೆ ನನಗೆ ಪ್ರಾಪಂಚಿಕ ಅಡಚಣೆ ಇರಲಿಲ್ಲ. 2016 ರಲ್ಲಿ ನೊಂದಾಯಿತ ಖರೀದಿ ಕರಾರು ಪತ್ರ ಮಾಡಿಕೊಟ್ಟಿರುವುದಕ್ಕೆ ನನ್ನ ತಾಯಿ ಜಯಶ್ರೀ ಒಪ್ಪಿಗೆ ಪತ್ರ ನೀಡಿರುತ್ತಾರೆ ಎಂದರೆ ಅವರು ಯಾರು ಎಂದು ಗೊತ್ತಿಲ್ಲ ಎಂದು ನುಡಿಯುತ್ತಾರೆ. ಖರೀದಿ ಕರಾರು ಪತ್ರದ ಸಂಬಂಧವಾಗಿ 3 ನೇ ಪ್ರತಿವಾದಿಯು ನನ್ನ ತಂದೆಯ ವಿರುದ್ಧ ದಾವೆಯನ್ನು ಹೂಡಿರುತ್ತಾರೆ ಎಂದರೆ ಗೊತ್ತಿಲ್ಲ. ಅಸಲು ದಾವೆ 8/2018 ಇದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ದಾವೆ ರಾಜಿ ಆಗಿತ್ತು ಎಂದರೆ ಗೊತ್ತಿಲ್ಲ. ಅದರಂತೆ ಸರ್ವೆ ನಂ. 108/3 ಆಸ್ತಿಯನ್ನು ಮಾತ್ರ ಖರೀದಿಗೆ ಕೊಟ್ಟಿರುತ್ತಾರೆ ಎಂದರೆ ಗೊತ್ತಿಲ್ಲ.

3 ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಸರ್ವೆ. ನಂ. 106/5 ಆಸ್ತಿಯು ನನ್ನ ತಂದೆಯ ಹೆಸರಿನಲ್ಲಿದೆ ಎಂದರೆ ಸರಿ. 3 ನೇ ಪ್ರತಿವಾದಿ ಸದ್ಭಾವಾನೆಯಿಂದ ದಾವಾ ಆಸ್ತಿ ಖರೀದಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಂದೆ ಪ್ರಾಪಂಚಿಕ ಅಡಚಣೆಯಿಂದಾಗಿ ದಾವಾ ಆಸ್ತಿಯನ್ನು 3 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. 3 ನೇ ಪ್ರತಿವಾದಿ ಸುಳ್ಳು ದಾವೆ ದಾಖಲಿಸಿದ್ದಾರೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲಾ**

ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೆ.ಸರಿ ಇದೆ

Sd/-

ಹೆಚ್ಚುವರಿ ದಿವಾಣಿ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಧೀಶರು ಜಮಖಂಡಿ.